# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:12ನೇ ಮಾರ್ಚ್, 2025**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

| | |
|---|---|
| 2ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 29(142) | ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು |
| 3ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 44(251) | ಮಾನ್ಯ ಲೋಕೋಪಯೋಗಿ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

## 02. ಶೂನ್ಯವೇಳೆ ಪ್ರಸ್ತಾವಗಳು

## 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿಯವರು:**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ(ತಿದ್ದುಪಡಿ) ವಿಧೇಯಕ, 2025** ಮತ್ತು **ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ(ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2025** ಹಾಗೂ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುವುದು.

01. ಕರ್ನಾಟಕ ಕಿರು(Micro) ಸಾಲ ಮತ್ತು ಸಣ್ಣ ಸಾಲ(ಬಲವಂತದ ಕ್ರಮಗಳ ಪ್ರತಿಬಂಧಕ) ವಿಧೇಯಕ, 2025
02. ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕ, 2024
03. ಕರ್ನಾಟಕ ಗಿರವಿದಾರರ (ತಿದ್ದುಪಡಿ) ವಿಧೇಯಕ, 2025
04. ಕರ್ನಾಟಕ ಲೇವಾದೇವಿದಾರರ(ತಿದ್ದುಪಡಿ) ವಿಧೇಯಕ, 2025

## 04. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ಕಿರು (Micro) ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ವಿಧೇಯಕ, 2025
**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು)**

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಕಿರು (Micro) ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ವಿಧೇಯಕ"**ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕ, 2024
**ಶ್ರೀ ಡಿ.ಕೆ. ಶಿವಕುಮಾರ್ (ಮಾನ್ಯ ಉಪ ಮುಖ್ಯಮಂತ್ರಿಗಳು)**

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ **"ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕ"**ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ಗಿರವಿದಾರರ (ತಿದ್ದುಪಡಿ) ವಿಧೇಯಕ, 2025
**ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಾನ್ಯ ಸಹಕಾರ ಸಚಿವರು)**

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಗಿರವಿದಾರರ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ವಿಧೇಯಕ, 2025
**ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಾನ್ಯ ಸಹಕಾರ ಸಚಿವರು)**

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

05. ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ (ತಿದ್ದುಪಡಿ) ವಿಧೇಯಕ, 2025
**ಶ್ರೀ ಕ್ಯಾತ್ಸಂದ್ರ ಎನ್. ರಾಜಣ್ಣ (ಮಾನ್ಯ ಸಹಕಾರ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

06. ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2025
**ಶ್ರೀ ಶಿವಾನಂದ ಪಾಟೀಲ್ (ಮಾನ್ಯ ಜವಳಿ, ಕಬ್ಬು, ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶನಾಲಯ ಹಾಗೂ ಸಹಕಾರದಿಂದ ಕೃಷಿ ಮಾರುಕಟ್ಟೆ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

"2025ನೇ ಮಾರ್ಚ್, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:04.03.2025ರಂದು **ಶ್ರೀ ಐವನ್ ಡಿ'ಸೋಜಾ** ರವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

ಐದನೇ ದಿನ

## 06. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು 2014-15ನೇ ಸಾಲಿನಲ್ಲಿ ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ವತಿಯಿಂದ ಕೈಗೊಂಡಿದ್ದ ಏರಿಯಲ್ ಫ್ಯೂಸ್ ಬೋರ್ಡ್ ಮತ್ತು ತಂತಿ ಬೇಲಿ ಅಳವಡಿಸುವ ತುಂಡು ಗುತ್ತಿಗೆ ಕಾಮಗಾರಿಗೆ ಸಂಬಂಧಿಸಿದಂತೆ ಮರುತನಿಖೆಗೆ ಹೊರಡಿಸಿರುವ ಆದೇಶವನ್ನು ಹಿಂಪಡೆದು ತಪ್ಪಿತಸ್ಥರಲ್ಲದ ಅಧಿಕಾರಿ/ನೌಕರರುಗಳಿಗೆ ನ್ಯಾಯ ಒದಗಿಸುವ ಕುರಿತು ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ಬಿ.ಜಿ. ಪಾಟೀಲ್** ಅವರು ಕಲಬುರಗಿ ಜಿಲ್ಲೆಯಲ್ಲಿ ಕಳೆದ 15-20 ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ನೌಕರರಿಗೆ ಮಾಸಿಕ ವೇತನವನ್ನು ಕನಿಷ್ಠ ರೂ.31,000ಗಳಿಗೆ ನಿಗದಿಪಡಿಸಿ ಅವರನ್ನು ಖಾಯಂ ಮಾಡುವುದರ ಜೊತೆಗೆ ಬೀದರ್ ಮಾದರಿಯಲ್ಲಿ ಸಹಕಾರ ಸಂಘದ ಸೊಸೈಟಿಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಾರಿ ಮಾಡುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦3. **ಶ್ರೀ ಎಂ. ನಾಗರಾಜು** ಅವರು **"ಕಾಡುಗೊಲ್ಲ"** ಜನಾಂಗವನ್ನು ಹಿಂದುಳಿದ ವರ್ಗಗಳ ಪ್ರವರ್ಗ-ಎ ಮತ್ತು ಬಿ ಅಡಿಯಲ್ಲಿ ಸೇರ್ಪಡೆಗೊಳಿಸಿ ಆದೇಶಿಸಲಾಗಿದ್ದು, ಜಾತಿ ಪ್ರಮಾಣ ಪತ್ರ ನೀಡಲು ವಿಳಂಬವಾಗುತ್ತಿರುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

೦1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್ ಹಾಗೂ ಮಾನ್ಯ ಶಾಸಕರುಗಳಾದ ಶ್ರೀ ಎಸ್.ವ್ಹಿ. ಸಂಕನೂರ, ಶ್ರೀ ಎಸ್.ಎಲ್. ಭೋಜೇಗೌಡ, ಶ್ರೀ ಸಿ.ಟಿ. ರವಿ, ಶ್ರೀ ಶಶೀಲ್ ಜಿ. ನಮೋಶಿ ಹಾಗೂ ಇತರರು** ಕರ್ನಾಟಕ ಲೋಕಸೇವಾ ಆಯೋಗ ನಡೆಸುತ್ತಿರುವ ಕೆ.ಎ.ಎಸ್. ಪರೀಕ್ಷೆಯಲ್ಲಿ ಆಗುತ್ತಿರುವ ತಪ್ಪುಗಳಿಂದಾಗಿ ಅಭ್ಯರ್ಥಿಗಳು ಆತಂಕಕ್ಕೀಡಾಗಿರುವ ಕುರಿತು ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ.

೦2. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಮಾನ್ಯ ಶಾಸಕರುಗಳಾದ ಶ್ರೀ ಶಶೀಲ್ ಜಿ. ನಮೋಶಿ, ಡಾ: ತಳವಾರ್ ಸಾಬಣ್ಣ, ಶ್ರೀಮತಿ ಹೇಮಲತಾ ನಾಯಕ್ ಹಾಗೂ ಶ್ರೀ ವೈ.ಎಂ. ಸತೀಶ್** ಅವರುಗಳು ರಾಜ್ಯದಲ್ಲಿ 2024-25ನೇ ಸಾಲಿನಲ್ಲಿ ಮುಂಗಾರು ಮತ್ತು ಹಿಂಗಾರು ಬೆಳೆಗಳ ಅತಿವೃಷ್ಠಿ, ಅನಾವೃಷ್ಠಿ ಮತ್ತು ನೆಟೆ ರೋಗದಿಂದ ತೊಗರಿ ಬೆಳೆ ನಾಶವಾಗಿದ್ದು, ರೈತರು ಸಂಕಷ್ಟಕ್ಕೀಡಾಗಿರುವುದರಿಂದ ತೊಗರಿ ಬೆಳೆಗಾರರಿಗೆ ಬೆಂಬಲ ಬೆಲೆ ನಿಗದಿಪಡಿಸಿ ಕೂಡಲೇ ಪರಿಹಾರ ಒದಗಿಸುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ರಾಮೋಜಿಗೌಡ** ಅವರು ಉನ್ನತ ಶಿಕ್ಷಣ ಪಡೆದು ಪ್ರಾಥಮಿಕ ಶಾಲೆಗಳಲ್ಲಿ ನಿವೃತ್ತಿಯ ಅಂಚಿನಲ್ಲಿರುವ 58 ಸಾವಿರ ಶಿಕ್ಷಕರುಗಳಿಗೆ ಸೇವಾ ಹಿರಿತನದ ಮೇರೆಗೆ ನಿಗದಿತ ಅವಧಿಯಲ್ಲಿ ಮುಂಬಡ್ತಿ ನೀಡುವ ಕುರಿತು ಪ್ರಸ್ತಾಪಿಸುವುದು.

೦4. **ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್ ಹಾಗೂ ಶ್ರೀಮತಿ ಹೇಮಲತಾ ನಾಯಕ್** ಅವರುಗಳು ತುಂಗಭದ್ರ ನದಿ ತೀರದಲ್ಲಿ ದಿನಾಂಕ:06.03.2025ರಂದು ವಿದೇಶಿ ಪ್ರವಾಸಿಗರ ಮೇಲೆ ಅತ್ಯಾಚಾರವಾಗಿರುವುದಲ್ಲದೆ, ಮಾರಣಾಂತಿಕ ಹಲ್ಲೆ ನಡೆಸಿರುವುದು ಹಾಗೂ ತುಂಗಭದ್ರ ನದಿ ಸುತ್ತಲಿನ ಗ್ರಾಮದಲ್ಲಿ ಹೋಮ್‌ಸ್ಟೇಗಳನ್ನು ಅನಧಿಕೃತವಾಗಿ ನಡೆಸುತ್ತಿರುವ ಕುರಿತು ಪ್ರಸ್ತಾಪಿಸುವುದು.

.5..

೦೫. **ಶ್ರೀಯುತರುಗಳಾದ ಐವನ್ ಡಿ'ಸೋಜಾ, ಮಂಜುನಾಥ್ ಭಂಡಾರಿ, ಬಸನಗೌಡ ಬಾದರ್ಲಿ, ಎಂ. ನಾಗರಾಜು ಹಾಗೂ ಡಾ: ಚಂದ್ರಶೇಖರ ಬಸವರಾಜ ಪಾಟೀಲ** ಅವರುಗಳು ದಕ್ಷಿಣ ಕನ್ನಡ ಮೂಲ್ಕಿ ತಾಲ್ಲೂಕಿನ ಬಳ್ಕುಂಜೆ, ಕೊಲ್ಲೂರು ಮತ್ತು ಉಳೆಪಾಡಿ ಗ್ರಾಮಗಳ 1091 ಎಕರೆ ಪ್ರದೇಶದಲ್ಲಿ ಕೆ.ಐ.ಎ.ಡಿ.ಬಿ.ಯ ಕೈಗಾರಿಕಾ ವಲಯ ನಿರ್ಮಾಣಕ್ಕಾಗಿ ಸರ್ಕಾರ ಹೊರಡಿಸಿರುವ 28(1) ಅಧಿಸೂಚನೆಯನ್ನು ರದ್ದುಪಡಿಸುವ ಕುರಿತು ಪ್ರಸ್ತಾಪಿಸುವುದು.

## 08. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| **ಶ್ರೀಯುತರುಗಳಾದ:-**<br>**ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು, ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಮಾನ್ಯ ಶಾಸಕರುಗಳಾದ ಕಿಶೋರ್ ಕುಮಾರ್ ಪುತ್ತೂರ್, ಕೇಶವ ಪ್ರಸಾದ್ ಎಸ್. ಹಾಗೂ ಇತರರು** | ಮೈಸೂರಿನ ಉದಯಗಿರಿಯಲ್ಲಿ ಏಕಾಏಕಿ ಒಂದೇ ಕೋಮಿನವರು ಪ್ರತಿಭಟನೆ ನಡೆಸಿ, ಪೊಲೀಸ್ ಠಾಣೆ, ವಾಹನ ಹಾಗೂ ಪೊಲೀಸ್‌ನವರ ಮೇಲೆ ದಾಳಿ ನಡೆಸಿರುವುದು ಹಾಗೂ ರಾಜ್ಯದಲ್ಲಿ ಹೆಚ್ಚುತ್ತಿರುವ ಕೊಲೆ, ಅತ್ಯಾಚಾರ, ಗಲಭೆಗಳಿಂದ ಜನಸಾಮಾನ್ಯರಲ್ಲಿ ಅಭದ್ರತೆಯ ವಾತಾವರಣ ನಿರ್ಮಾಣವಾಗಿರುವ ಕುರಿತು. |

## 09. ವಿತ್ತೀಯ ಕಾರ್ಯಕಲಾಪ

2025-26ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**